# All India Radio: Bangalore
# National Bulletin In Kannada
# 07.01.2026  19.35 p.m.
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಇಸ್ರೇಲ್ ಪ್ರಧಾನಿ ಜೊತೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆ - ಉಭಯ ದೇಶಗಳ ಕಾರ್ಯತಂತ್ರದ ಪಾಲುದಾರಿಕೆ ಕುರಿತು ಚರ್ಚೆ

೨. ಆತ್ಮನಿರ್ಭರ ಭಾರತಕ್ಕೆ ಉತ್ಪಾದನೆ ಹೆಚ್ಚಳ, ಆಧುನಿಕ ತಂತ್ರಜ್ಞಾನದ ಬಳಕೆ ಅತ್ಯಗತ್ಯ - ಕೇಂದ್ರ ಸಚಿವ ನಿತಿನ್ ಗಡ್ಕರಿ ಪ್ರತಿಪಾದನೆ

೩. ಛತ್ತೀಸ್‌ಗಢದ ಸುಕ್ಮಾ ಜಿಲ್ಲೆಯಲ್ಲಿ ೨೬ ನಕ್ಸಲರ ಶರಣಾಗತಿ; ೫೦ ಸಾವಿರ ರೂಪಾಯಿ ಆರ್ಥಿಕ ಸಹಾಯ ಘೋಷಣೆ

೪. ವಿಶ್ವಕಪ್ ಟಿ-೨೦ ಕ್ರಿಕೆಟ್ ಟೂರ್ನಿ ಸ್ಥಳಾಂತರ ಕುರಿತ ಬಾಂಗ್ಲಾ ಮನವಿ ತಿರಸ್ಕರಿಸಿದ ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿ

***************

ಪ್ರಧಾನಿ ನರೇಂದ್ರ ಮೋದಿ ಇಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿ, ಮುಂದಿನ ದಿನಗಳಲ್ಲಿ ಭಾರತ-ಇಸ್ರೇಲ್ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಮಾರ್ಗಗಳ ಕುರಿತು ಚರ್ಚಿಸಿದರು. ಪ್ರಜಾಪ್ರಭುತ್ವ ಮೌಲ್ಯಗಳು, ಆಳವಾದ ಪರಸ್ಪರ ನಂಬಿಕೆ ಮತ್ತು ಭವಿಷ್ಯದ ದೃಷ್ಟಿಕೋನದಿಂದ ಮಾರ್ಗದರ್ಶನ ಪಡೆದ ಭಾರತ-ಇಸ್ರೇಲ್ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಉಭಯ ನಾಯಕರು ಹಂಚಿಕೆಯ ಆದ್ಯತೆಗಳನ್ನು ಗುರುತಿಸಿದರು. ಭಯೋತ್ಪಾದನೆಯ ಎಲ್ಲಾ ರೂಪಗಳು ಮತ್ತು ಅಭಿವ್ಯಕ್ತಿಗಳ ಬಗ್ಗೆ ಅವರು ತಮ್ಮ ಶೂನ್ಯ-ಸಹಿಷ್ಣುತೆಯ ವಿಧಾನವನ್ನು ಪುನರುಚ್ಚರಿಸಿದರು ಮತ್ತು ಈ ಪಿಡುಗಿನ ವಿರುದ್ಧ ಹೋರಾಡುವ ಬದ್ಧತೆಯನ್ನು ಪುನರುಚ್ಚರಿಸಿದರು.

***************

ಆತ್ಮ ನಿರ್ಭರ ಭಾರತ ಪರಿಕಲ್ಪನೆ ಸಾಕಾರಗೊಳ್ಳಲು ಉತ್ಪಾದನೆ ಹೆಚ್ಚಳ, ವೆಚ್ಚ ಕಡಿತ ಹಾಗೂ ಆಧುನಿಕ ತಂತ್ರಜ್ಞಾನ ಬಳಕೆ ಅತ್ಯಂತ ಪ್ರಮುಖ ಅಂಶಗಳಾಗಿವೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಖಾತೆ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ವಿಜ್ಞಾನ ಮತ್ತು ಕೈಗಾರಿಕಾ ಸಂಶೋಧನಾ ಮಂಡಳಿ ದೆಹಲಿಯಲ್ಲಿಂದು ಆಯೋಜಿಸಿದ್ದ ತಂತ್ರಜ್ಞಾನ ಹಸ್ತಾಂತರ ಕಾರ್ಯಕ್ರಮದಲ್ಲಿ ಅವರು, ಜ್ಞಾನವನ್ನು ಸಂಪತ್ತಾಗಿ ಪರಿವರ್ತಿಸುವ ಸಂಶೋಧನೆ ಹಾಗೂ ತಂತ್ರಜ್ಞಾನ ಅತ್ಯವಶ್ಯ ಎಂದರು. ನಾವೀನ್ಯತೆ, ಉದ್ಯಮಶೀಲತೆ, ಕೌಶಲ್ಯಾಭಿವೃದ್ಧಿ, ಸಂಶೋಧನೆ, ವಿಜ್ಞಾನ ಮತ್ತು ತಂತ್ರಜ್ಞಾನಕ್ಕೆ ಉತ್ತೇಜನ, ರಫ್ತು ಹೆಚ್ಚಿಸುವುದು, ಆಮದು ಕಡಿಮೆ ಮಾಡುವುದು, ಯೋಗ್ಯ ವ್ಯಕ್ತಿಗೆ ಸೂಕ್ತ ಕಾರ್ಯ ನಿಯೋಜನೆ ಹಾಗೂ ಸೂಕ್ತ ಕಾರ್ಯಕ್ಕೆ ಯೋಗ್ಯ ವ್ಯಕ್ತಿಯ ನಿಯೋಜನೆ ಅಭಿವೃದ್ಧಿಯ ಪ್ರಮುಖ ಅಂಶಗಳಾಗಿವೆ ಎಂದು ಅವರು ತಿಳಿಸಿದರು.

***************

ಛತ್ತೀಸ್‌ಗಢದ ಸುಕ್ಮಾ ಜಿಲ್ಲೆಯಲ್ಲಿ ಇಂದು ೨೬ ನಕ್ಸಲರು ಶರಣಾಗಿದ್ದಾರೆ, ಅವರಲ್ಲಿ ೧೩ ಜನರ ಬಂಧನಕ್ಕೆ ೬೫ ಲಕ್ಷ ರೂಪಾಯಿಗಳ ಸಾಮೂಹಿಕ ಬಹುಮಾನವನ್ನು ಘೋಷಿಸಲಾಗಿತ್ತು. ಏಳು ಮಹಿಳೆಯರನ್ನು ಒಳಗೊಂಡ ಈ ನಕ್ಸಲ್ ಕಾರ್ಯಕರ್ತರು ಪೂನಾ ಮಾರ್ಗೆಂ ಪುನರ್ವಸತಿ ಯೋಜನೆಯ ಅಡಿಯಲ್ಲಿ ಹಿರಿಯ ಪೊಲೀಸ್ ಹಾಗೂ ಸಿಆರ್‌ಪಿಎಫ್ ಅಧಿಕಾರಿಗಳ ಮುಂದೆ ಶರಣಾದರು ಎಂದು ಪೊಲೀಸ್ ವರಿಷ್ಠಾಧಿಕಾರಿ ಕಿರಣ್ ಚವಾಣ್ ತಿಳಿಸಿದ್ದಾರೆ. ಶರಣಾದ ಎಲ್ಲ ನಕ್ಸಲರಿಗೆ ತಲಾ ೫೦ ಸಾವಿರ ರೂಪಾಯಿ ಆರ್ಥಿಕ ಸಹಾಯ ನೀಡಲಾಗಿದ್ದು, ಸರ್ಕಾರದ ನೀತಿಯಂತೆ ಮುಂದಿನ ಪುನರ್ವಸತಿ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ.

***************

ಕೇಂದ್ರ ಸರ್ಕಾರ ಜಾರಿಗೊಳಿಸಿರುವ ನಾಲ್ಕು ನೂತನ ಕಾರ್ಮಿಕ ವಿಧಿಗಳಲ್ಲಿ ಉದ್ಯೋಗಿಗಳ ಆರೋಗ್ಯ ಮತ್ತು ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ಕೇಂದ್ರ ಉದ್ಯೋಗ ಮತ್ತು ಕಾರ್ಮಿಕ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ. ಜಾರ್ಖಂಡ್‌ನ ಧನಬಾದ್‌ನಲ್ಲಿರುವ ಗಣಿಗಾರಿಕೆ ಸುರಕ್ಷತೆಯ ಮಹಾನಿರ್ದೇಶನಾಲಯದ ಕೇಂದ್ರ ಕಚೇರಿಗೆ ಇಂದು ಭೇಟಿ ನೀಡಿದ ಅವರು, ದೇಶದ ಅಭಿವೃದ್ಧಿಗೆ ಗಣಿಗಾರಿಕೆ ಅತ್ಯಗತ್ಯ. ಆದರೆ ಕಾರ್ಮಿಕ

ಸುರಕ್ಷತೆ ಗಣಿಗಾರಿಕೆಗಿಂತಲೂ ಮುಖ್ಯವಾದದ್ದು ಎಂದು ಹೇಳಿದರು. ನೂತನ ಕಾರ್ಮಿಕ ನೀತಿಗಳು ಉದ್ಯೋಗಗಳ ಕಲ್ಯಾಣ ಹಾಗೂ ಅಭಿವೃದ್ಧಿಗೆ ಪೂರಕವಾಗಿದ್ದು, ಇವುಗಳ ಅನುಷ್ಠಾನದಲ್ಲಿ ಕಾರ್ಖಾನೆಗಳು ಮತ್ತು ಸಂಸ್ಥೆಗಳ ಪಾತ್ರ ಮಹತ್ವದ್ದು ಎಂದು ಅವರು ತಿಳಿಸಿದರು.

***************

ಆಂಧ್ರಪ್ರದೇಶವು ರಸ್ತೆ ನಿರ್ಮಾಣದಲ್ಲಿ ಎರಡು ಗಿನ್ನೆಸ್ ವಿಶ್ವ ದಾಖಲೆಗಳನ್ನು ಸ್ಥಾಪಿಸುವ ಮೂಲಕ ಹೆದ್ದಾರಿ ಅಭಿವೃದ್ಧಿಯಲ್ಲಿ ಪ್ರಮುಖ ಮೈಲಿಗಲ್ಲು ಸಾಧಿಸಿದೆ. ಬೆಂಗಳೂರು-ಕಡಪ-ವಿಜಯವಾಡ ಆರ್ಥಿಕ ಕಾರಿಡಾರ್‌ನಲ್ಲಿ ಈ ದಾಖಲೆಗಳು ಸೃಷ್ಟಿಯಾಗಿವೆ. ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ನಿರಂತರ ೨೪ ಗಂಟೆಗಳ ಅವಧಿಯಲ್ಲಿ, ತಂಡವು ೨೮.೯೫ ಕಿಲೋಮೀಟರ್ ಲೇನ್ ರಸ್ತೆಯನ್ನು ಯಶಸ್ವಿಯಾಗಿ ನಿರ್ಮಿಸಿತು. ೧೦ ಸಾವಿರದ ೬೭೫ ಮೆಟ್ರಿಕ್ ಟನ್ ಬಿಟುಮಿನಸ್ ಕಾಂಕ್ರೀಟ್ ಬಳಸಿ, ಯಾವುದೇ ಅಡೆತಡೆಯಿಲ್ಲದೆ ಎನ್‌ಎಚ್‌ಎಐ ನಿಗದಿಪಡಿಸಿದ ಕಟ್ಟುನಿಟ್ಟಾದ ಗುಣಮಟ್ಟದ ಮಾನದಂಡಗಳನ್ನು ಅನುಸರಿಸಿ ಈ ಕೆಲಸ ಪೂರ್ಣಗೊಳಿಸಲಾಯಿತು. ಇದೇ ೧೧ರೊಳಗೆ ಈ ಕಾರಿಡಾರ್‌ನ ಪ್ಯಾಕೇಜ್ ೨ ಮತ್ತು ೩ ರಲ್ಲಿ ಇನ್ನೂ ಎರಡು ಗಿನ್ನೆಸ್ ವಿಶ್ವ ದಾಖಲೆಗಳನ್ನು ನಿರ್ಮಿಸಲು ಯೋಜಿಸಲಾಗಿದೆ ಎಂದು ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಹೇಳಿದ್ದಾರೆ.

***************

ಪ್ರಧಾನಿ ನರೇಂದ್ರ ಮೋದಿ ಭಾನುವಾರ ಗುಜರಾತ್‌ನ ಸೋಮನಾಥಕ್ಕೆ ಭೇಟಿ ನೀಡಲಿದ್ದು, ಸೋಮನಾಥದಲ್ಲಿ ವರ್ಷಪೂರ್ತಿ ಚಟುವಟಿಕೆಗಳನ್ನು ಯೋಜಿಸಲಾಗಿದ್ದು, ’ಸೋಮನಾಥ ಸ್ವಾಭಿಮಾನ್ ಪರ್ವ್’ನಲ್ಲಿ ಭಾಗವಹಿಸಲಿದ್ದಾರೆ. ೨೦೨೬ನೇ ವರ್ಷವು ಸೋಮನಾಥ್ ಮೇಲಿನ ಮೊದಲ ದಾಳಿಗೆ ಸಾವಿರ ವರ್ಷಗಳು ಪೂರ್ಣಗೊಳ್ಳುವ ನೆನಪಿನ ವರ್ಷವಾಗಿದೆ. ‘ಸೋಮನಾಥ್ ಸ್ವಾಭಿಮಾನ ಪರ್ವ್’ ನಾಳೆ ಆರಂಭವಾಗಿ ಇದೇ ೧೧ರವರೆಗೆ ಆಚರಿಸಲಾಗುತ್ತದೆ. ಈ ಅವಧಿಯಲ್ಲಿ ವರ್ಷಪೂರ್ತಿ ನಡೆಯುವ ಆಧ್ಯಾತ್ಮಿಕ, ಸಾಂಸ್ಕೃತಿಕ ಮತ್ತು ಸಾಮಾಜಿಕ ಚಟುವಟಿಕೆಗಳು ಆರಂಭವಾಗಲಿವೆ. ಈ ಆಚರಣೆಗಳು ೧೯೫೧ರಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ನೇತೃತ್ವದಲ್ಲಿ ಪುನರ್ ನಿರ್ಮಾಣಗೊಂಡ ದೇವಾಲಯದ ಉದ್ಘಾಟನೆಯ ೭೫ನೇ ವಾರ್ಷಿಕೋತ್ಸವದೊಂದಿಗೆ ಈ ಆಚರಣೆಗಳು ನಡೆಯುತ್ತಿವೆ.

***************

ಈ ತಿಂಗಳ ೨೧ರಿಂದ ನವದೆಹಲಿಯ ಭಾರತ್ ಮಂಟಪಂನಲ್ಲಿ ಭಾರತ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ಮತ್ತು ಚುನಾವಣಾ ನಿರ್ವಹಣೆಯ ಕುರಿತ ಮೂರು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನ ೨೦೨೬ ನಡೆಯಲಿದೆ. ಈ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಭಾರತ ಚುನಾವಣಾ ಆಯೋಗದ ಆಶ್ರಯದಲ್ಲಿ ಭಾರತ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ಮತ್ತು ಚುನಾವಣಾ ನಿರ್ವಹಣಾ ಸಂಸ್ಥೆ, ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ಮತ್ತು ಚುನಾವಣಾ ಸಹಾಯ ಸಂಸ್ಥೆ ಇಂಟರ್‌ನ್ಯಾಷನಲ್ ಸಹಭಾಗಿತ್ವದಲ್ಲಿ ಆಯೋಜಿಸುತ್ತಿದೆ. ಸಮ್ಮೇಳನದ ಕುರಿತು ಇಂದು ನವದೆಹಲಿಯಲ್ಲಿ ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿದ ಐಐಸಿಡಿಇಎಂ ಮಹಾನಿರ್ದೇಶಕ ರಾಕೇಶ್ ವರ್ಮಾ, “ಎಲ್ಲರನ್ನೂ ಒಳಗೊಳ್ಳುವ, ಶಾಂತ, ಸ್ಥಿತಿಸ್ಥಾಪಕ ಮತ್ತು ಸುಸ್ಥಿರ ವಿಶ್ವಕ್ಕಾಗಿ ಪ್ರಜಾಪ್ರಭುತ್ವ” ಎನ್ನುವ ವಿಷಯದ ಮೇಲೆ ಈ ಸಮ್ಮೇಳನ ನಡೆಯಲಿದ್ದು, ಚುನಾವಣಾ ನಿರ್ವಹಣಾ ಸಂಸ್ಥೆಗಳ ನಡುವಿನ ಅಂತಾರಾಷ್ಟ್ರೀಯ ಸಹಕಾರಕ್ಕೆ ವೇದಿಕೆಯಾಗಿದೆ ಎಂದು ಅವರು ತಿಳಿಸಿದರು. ಈ ಸಂದರ್ಭದಲ್ಲೇ ಅವರು ಐಐಸಿಡಿಇಎಂ-೨೦೨೬ ಸಮ್ಮೇಳನದ ಲಾಂಛನವನ್ನು ಬಿಡುಗಡೆ ಮಾಡಿದರು.

***************

ದೇಶದ ಒಟ್ಟು ೫೦ ಸಾವಿರ ಆರೋಗ್ಯ ಸೌಲಭ್ಯಗಳು ರಾಷ್ಟ್ರೀಯ ಗುಣಮಟ್ಟ ಖಾತ್ರಿ ಶ್ರೇಣಿಯ ಪ್ರಮಾಣೀಕರಣಕ್ಕೆ ಭಾಜನವಾಗಿದ್ದು, ರಾಷ್ಟ್ರದ ಆರೋಗ್ಯ ವಲಯ ಉನ್ನತ ಮಟ್ಟಕ್ಕೆ ಏರುತ್ತಿರುವ ಸಂಕೇತವಾಗಿದೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ತಿಳಿಸಿದೆ.
ಎಲ್ಲ ನಾಗರಿಕರಿಗೂ ಸುರಕ್ಷಿತ ಮತ್ತು ಗುಣಮಟ್ಟದ ಆರೋಗ್ಯ ಸೇವೆ ಹಾಗೂ ರೋಗಿಗಳಿಗೆ ಉತ್ತಮ ಆರೈಕೆ ಸೌಲಭ್ಯ ಒದಗಿಸುವ ರಾಷ್ಟ್ರೀಯ ಬದ್ಧತೆಯ ಸಾಧನೆ ಇದಾಗಿದೆ ಎಂದು ಸಚಿವಾಲಯ ತಿಳಿಸಿದೆ.

ಜಾಗತಿಕ ಅತ್ಯುತ್ತಮ ಆರೋಗ್ಯ ಮಾದರಿ ಹಾಗೂ ಸಾರ್ವಜನಿಕ ಆರೋಗ್ಯ ಸೌಲಭ್ಯಗಳ ನಿರ್ದಿಷ್ಟ ಅಗತ್ಯತೆಯನ್ನು ಗಮನದಲ್ಲಿರಿಸಿ, ರಾಷ್ಟ್ರೀಯ ಗುಣಮಟ್ಟ ಖಾತ್ರಿ ಶ್ರೇಣಿಯನ್ನು ೨೦೨೪ರ ಜೂನ್‌ನಲ್ಲಿ ಜಾರಿಗೊಳಿಸಲಾಗಿದೆ. ಆರಂಭಿಕ ಹಂತದಲ್ಲಿ ಜಿಲ್ಲಾ ಮಟ್ಟದ ಆಸ್ಪತ್ರೆಗಳಿಗೆ ಈ ಮಾದರಿ ಅನ್ವಯಿಸಲಾಗುತ್ತಿದ್ದು, ನಂತರ ತಾಲೂಕು ಮಟ್ಟಕ್ಕೂ ವಿಸ್ತರಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ.

***************

ಭಾರತದಲ್ಲಿ ಆಡಲಾಗುವ ವಿಶ್ವಕಪ್ ಟಿ-೨೦ ಕ್ರಿಕೆಟ್ ಟೂರ್ನಿಯ ತನ್ನ ಪಂದ್ಯಗಳನ್ನು ಬೇರೆ ದೇಶಕ್ಕೆ ಸ್ಥಳಾಂತರಿಸುವಂತೆ ಬಾಂಗ್ಲಾ ದೇಶ ಕ್ರಿಕೆಟ್ ಮಂಡಳಿ ಮಾಡಿಕೊಂಡಿದ್ದ ಮನವಿಯನ್ನು ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿ ತಿರಸ್ಕರಿಸಿದೆ.

ಭದ್ರತಾ ಕಾಳಜಿಯನ್ನು ಉಲ್ಲೇಖಿಸಿ, ಬಾಂಗ್ಲಾದೇಶ ಕ್ರಿಕೆಟ್ ಮಂಡಳಿಯು ವಿಶ್ವಕಪ್  ಪಂದ್ಯಗಳನ್ನು ಆಡಲು ಭಾರತಕ್ಕೆ ಪ್ರಯಾಣಿಸಲು ನಿರಾಕರಿಸಿತ್ತು.

ಬಾಂಗ್ಲಾದೇಶದಲ್ಲಿ ಹಿಂದೂಗಳ ಹತ್ಯೆಗಳ ಹಿನ್ನೆಲೆಯಲ್ಲಿ ಹಲವಾರು ಸಂಘಟನೆಗಳು ಪ್ರತಿಭಟನೆ ನಡೆಸಿದ ಕಾರಣ, ಭಾರತ ಕ್ರಿಕೆಟ್ ನಿಯಂತ್ರಣ ಮಂಡಳಿಯು ಬಾಂಗ್ಲಾ ಆಟಗಾರ ಮುಸ್ತಾಫಿಜುರ್ ರೆಹಮಾನ್ ಅವರನ್ನು ಇಂಡಿಯನ್ ಪ್ರೀಮಿಯರ್ ಲೀಗ್ ಟೂರ್ನಿಯಿಂದ ಕೈಬಿಟ್ಟಿತ್ತು. ಈ ಬೆಳವಣಿಗೆ ನಡೆದ ಬೆನ್ನಲ್ಲೇ ಬಾಂಗ್ಲಾ ದೇಶ ಕ್ರಿಕೆಟ್ ಮಂಡಳಿಯು, ಭಾರತದಲ್ಲಿ ಟಿ-೨೦ ಪಂದ್ಯಗಳನ್ನು ಆಡದಿರಲು ನಿರ್ಧರಿಸಿತ್ತು.

ಆದರೆ, ಬಾಂಗ್ಲಾದೇಶ  ಭಾರತದಿಂದ ಪಂದ್ಯಗಳನ್ನು ಸ್ಥಳಾಂತರಿಸಲು ಸರಿಯಾದ ಕಾರಣಗಳನ್ನು ಹೊಂದಿಲ್ಲ. ಈಗಾಗಲೇ ಭಾರತೀಯ ಕ್ರಿಕೆಟ್ ಮಂಡಳಿ ಸಹ  ಭದ್ರತೆ ಒದಗಿಸುವುದಾಗಿ ಭರವಸೆ ನೀಡಿದೆ.  ಈ ಹಿನ್ನೆಲೆಯಲ್ಲಿ ಬಾಂಗ್ಲಾದೇಶ ಕ್ರಿಕೆಟ್ ಮಂಡಳಿಯ ಮನವಿಯನ್ನು ತಿರಸ್ಕರಿಸಲಾಗಿದೆ ಎಂದು ಐಸಿಸಿ  ಹೇಳಿದೆ.

***************

ನೇಪಾಳದಲ್ಲಿ ನಡೆಯುತ್ತಿರುವ ಪುರುಷ ಟಿ-೨೦ ವಿಶ್ವಕಪ್ ಟ್ರೋಫಿ ಪ್ರವಾಸದ ಅಂಗವಾಗಿ, ಕಠ್ಮಂಡುವಿನ ಯುನೆಸ್ಕೋ ವಿಶ್ವ ಪಾರಂಪರಿಕ ತಾಣ, ಬೌದ್ಧ ಸ್ತೂಪದಲ್ಲಿ ಟ್ರೋಫಿಯನ್ನು ಸಾರ್ವಜನಿಕ ಪ್ರದರ್ಶನಕ್ಕೆ ಇಡಲಾಗಿದೆ.

*******ಮುಕ್ತಾಯ*******